ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1037(1287)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಶಶಿಲ್ ಜಿ. ನಮೋಶಿ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಹೊಸದಾಗಿ ರಚನೆಯಾಗಿರುವ ತಾಲ್ಲೂಕು ಕೇಂದ್ರಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಕಾರ್ಯಾರಂಭ ಮಾಡುವ ಕುರಿತು

(ಅ) ಹೊಸದಾಗಿ ರಚನೆಯಾಗಿರುವ ತಾಲ್ಲೂಕು ಕೇಂದ್ರಗಳಲ್ಲಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳು ಕಾರ್ಯಾರಂಭಗೊಂಡಿದೆಯೇ;

(ಆ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳು ಹೊಸ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯಾರಂಭವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕೈಗೊಂಡ ಕ್ರಮಗಳೇನು;

(ಇ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳು ನಿಗದಿತ ಸಮಯಕ್ಕೆ ಕಾರ್ಯಾರಂಭ ಮಾಡದೇ ಇರುವುದರಿಂದ ಶೈಕ್ಷಣಿಕ ಗುಣಮಟ್ಟ ಹಾಗೂ ಶಿಕ್ಷಕರಿಗೆ ಆಡಳಿತಾತ್ಮಕ ಸೌಲಭ್ಯಗಳು ಸಿಗುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರಿಸುವುದು)